ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಆಳಂದ.

ಸಿ.ಸಿ.ನಂಃ 4512/2021 ಸಿ.ಡಬ್ಲ್ಯೂ –3 ಪಿ.ಡಬ್ಲ್ಯೂ -3

| | | |
|---|---|---|
| ಹೆಸರು | ಃ | ಸತೀಶ |
| ತಂದೆ | ಃ | ಜೈಪಾಲ ಶೆಟಗಾರ |
| ವಯಸ್ಸು | ಃ | ೩೯ ವರ್ಷ |
| ಉದ್ಯೋಗ | : | ಚಾಲಕ |
| ವಾಸಸ್ಥಳ | ಃ | ಆಳಂದ |

ದಿನಾಂಕಃ೩೦.೦೭.೨೦೨೪

ಸತ್ಯ ಪ್ರತಿಜ್ಞೆಯ ಮೇರೆಗೆ

---

**ಮುಖ್ಯ ವಿಚಾರಣೆ ಮಾನ್ಯ ಸಸಅ ಅವರಿಂದ**

ಆರೋಪಿತರ ಪರಿಚಯ ಇರುವುದಿಲ್ಲ. ಚಾಸಾ-2 ರವರ ಪರಿಚಯ ಇರುವುದಿಲ್ಲ. ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ. ಪೋಲಿಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಜರುಗಿಸಿರುವುದಿಲ್ಲ, ಮುದ್ದೇ ಮಾಲುಗಳನ್ನು ಜಪ್ತಿಪಡಿಸಿಕೊಂಡಿರುವುದಿಲ್ಲ. ಪೋಲಿಸರು ಒಂದು ದಾಖಲೆಗೆ ಸಹಿ ಮಾಡು ಎಂದು ಹೇಳಿದಕ್ಕೆ ಸಹಿ ಮಾಡಿರುತ್ತೇನೆ. ಸಾಕ್ಷಿ ನಿಪಿ-೨ರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಸಹಿಯನ್ನು ನಿಪಿ-೨(ಬಿ) ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಮಾನ್ಯ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿಯನ್ನು ಕೋರಿರುತ್ತಾರೆ. ಅನುಮತಿಸಲಾಯಿತು)

**ಪಾಟೀ ಸವಾಲು ಃ ಸ.ಸ.ಅ. ವಕೀಲರಿಂದ.**

ಈಗ ಓದಿ ಹೇಳಿದ ಹಾಗೆ ನನ್ನ ಮತ್ತು ಚಾಸಾ-2 ರವರ ಸಮಕ್ಷಮ ಪೋಲಿಸರು ಪಂಚನಾಮೆ ಜರುಗಿಸಿ ಮುದ್ದೇ ಮಾಲುಗಳನ್ನು ಜಪ್ತಿಪಡಿಸಿಕೊಂಡಿರುತ್ತಾರೆ ಎಂದರೆ ಸರಿ ಅಲ್ಲ. ಪಂಚನಾಮೆ ಜರುಗಿಸಿ ಸಹಿಯನ್ನು ಪಡೆದುಕೊಂಡಿದ್ದರು ಪಂಚನಾಮೆ ಜರುಗಿಸಿಲ್ಲ ಎಂದು ಆರೊಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂಧರೆ ಸರಿ ಅಲ್ಲ. ಸಾಕ್ಷಿಗೆ ಇದು ನಿನ್ನ ಸಹಿಯೇ ಎಂದು ಕೇಳಿದಾಗ ನನ್ನ ಸಹಿ ಅಲ್ಲ ಎಂದು ನುಡಿಯುತ್ತಾರೆ.

**ಪಾಟೀ ಸವಾಲು ಆರೋಪಿತರ ಪರ ಶ್ರೀ ಬಿ.ಐ.ಎಸ್. ವಕೀಲರಿಂದ**

ಆರೋಪಿತರ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ಹೇಳಿರುವುದರಿಂದ ಪಾಟೀ ಸವಾಲನ್ನು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಮರುವಿಚಾರಣೆಃ-** ಇರುವುದಿಲ್ಲ.

ಓ.ಹೇ.ಕೇ.ಸರಿ ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ. ಆಳಂದ